ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ: ಕಾಶಿಇ/ಶೈವಿ/33/ಇತರೆ/2022-23

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಶೇಷಾದ್ರಿ ರಸ್ತೆ, ಬೆಂಗಳೂರು -560001.
ದಿನಾಂಕ : 10.06.2022.

**ಸುತ್ತೋಲೆ**

ವಿಷಯ : ಭಾರತ ಸರ್ಕಾರದ ಸಂಸ್ಕೃತಿ ಸಚಿವಾಲಯ ಇವರು ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯದ ಸಹಯೋಗದೊಂದಿಗೆ ಆಯೋಜಿಸಿರುವ ರಸಪ್ರಶ್ನೆ ಕಾರ್ಯಕ್ರಮದಲ್ಲಿ (Jigyasa-The Heritage Quiz) ವಿದ್ಯಾರ್ಥಿಗಳು ಭಾಗವಹಿಸುವ ಬಗ್ಗೆ.

ಉಲ್ಲೇಖ : ಸರ್ಕಾರದ ಸುತ್ತೋಲೆ ಸಂಖ್ಯೆ : ಇಡಿ 99 ಯುಎನ್ಇ 2021, ದಿನಾಂಕ : 08.06.2022.

********

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ, ಭಾರತವು ಸ್ವಾತಂತ್ರದ 75ನೇ ಸುವರ್ಣ ಮಹೋತ್ಸವವನ್ನು ಆಚರಿಸುತ್ತಿರುವ ಸಂದರ್ಭದಲ್ಲಿ ಗೌರವಾನ್ವಿತ ಪ್ರಧಾನ ಮಂತ್ರಿಗಳಾದ ಶ್ರೀ ನರೇಂದ್ರ ಮೋದಿಯವರು ವಿಶ್ವದ ಅತ್ಯಂತ ಹಳೆಯ ನಾಗರೀಕತೆಗಳಲ್ಲೊಂದಾದ ಭಾರತದ ಶ್ರೀಮಂತ ಸಾಂಸ್ಕೃತಿಕ ಪರಂಪರೆಯ ಸಾಧನೆಗಳನ್ನು ಸ್ಮರಿಸಲು ಕೇಂದ್ರ ಸರ್ಕಾರದ ಸಂಸ್ಕೃತಿ ಸಚಿವಾಲಯದ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯದ ಸಹಯೋಗದೊಂದಿಗೆ Jigyasa-The Heritage Quiz ಅನ್ನು ಆಯೋಜಿಸಲಾಗಿದ್ದು, 18 ವರ್ಷ ಮೇಲ್ಪಟ್ಟ ವಯಸ್ಸಿನವರು ದಿನಾಂಕ : 15.07.2022ರ ಒಳಗಾಗಿ www.akamquiz.com ನಲ್ಲಿ ಲಾಗಿನ್ ಆಗುವ ಮೂಲಕ ರಸಪ್ರಶ್ನೆ ಕಾರ್ಯಕ್ರಮದಲ್ಲಿ ಭಾಗವಹಿಸಬಹುದಾಗಿದೆ. ಸದರಿ ಕಾರ್ಯಕ್ರಮವು 17 ಭಾಷೆಗಳಲ್ಲಿ ಲಭ್ಯವಿದ್ದು, ಭಾಗವಹಿಸುವ ಎಲ್ಲಾರಿಗೂ E-Certificate ಮತ್ತು ಸ್ಥಿರವಾಗಿ ಭಾಗವಹಿಸುವವರಿಗೆ ಬಹುಮಾನಗಳನ್ನು ನೀಡಲಾಗುವುದು ಎಂದು ತಿಳಿಸುತ್ತ ತಮ್ಮ ಇಲಾಖಾ ವ್ಯಾಪ್ತಿಯ ಎಲ್ಲಾ ಪದವಿ ಕಾಲೇಜುಗಳ ವಿದ್ಯಾರ್ಥಿಗಳು ಭಾಗವಹಿಸಲು ಅಗತ್ಯ ಕ್ರಮಕೈಗೊಳ್ಳುವಂತೆ ಸೂಚಿಸಲಾಗಿದೆ.

ಈ ಸಂಬಂಧ, ಇಲಾಖಾ ವ್ಯಾಪ್ತಿಗೊಳಪಡುವ ಎಲ್ಲಾ ಸರ್ಕಾರಿ/ಖಾಸಗಿ ಅನುದಾನಿತ ಹಾಗೂ ಖಾಸಗಿ ಅನುದಾನ ರಹಿತ ಪದವಿ ಕಾಲೇಜುಗಳ/ಇಂಜಿನಿಯರಿಂಗ್/ಡಿಪ್ಲೊಮೊ ಕಾಲೇಜುಗಳ ವಿದ್ಯಾರ್ಥಿಗಳು ಸದರಿ ರಸಪ್ರಶ್ನೆ ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ Jigyasa-The Heritage Quiz ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಈ ಮೂಲಕ ಸೂಚಿಸಿದೆ.

ಹೆಚ್ಚಿನ ಮಾಹಿತಿಯನ್ನು : http://akamquiz.com/resources ನಲ್ಲಿ ಪಡೆಯಬಹುದಾಗಿದೆ.

**(ಟಿಪ್ಪಣಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ)**

**ಕಾಲೇಜು ಶಿಕ್ಷಣ ಜಂಟಿ ನಿರ್ದೇಶಕರು**

ಇವರಿಗೆ:

1. ರಾಜ್ಯದ ಎಲ್ಲಾ ಸರ್ಕಾರಿ/ ಅನುದಾನಿತ ಹಾಗೂ ಅನುದಾನ ರಹಿತ ಪದವಿ ಕಾಲೇಜುಗಳ/ ಇಂಜಿನಿಯರಿಂಗ್ / ಡಿಪ್ಲೊಮೊ ಕಾಲೇಜುಗಳ ಪ್ರಾಂಶುಪಾಲರುಗಳಿಗೆ - ಸೂಕ್ತ ಕ್ರಮಕ್ಕಾಗಿ.

ಪ್ರತಿಯನ್ನು :

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಬಹುಮಹಡಿಗಳ ಕಟ್ಟಡ, ಬೆಂಗಳೂರು-01.
2. ಜಂಟಿ ನಿರ್ದೇಶಕರು, ಪ್ರಾದೇಶಿಕ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ಮೈಸೂರು, ಶಿವಮೊಗ್ಗ ಮಂಗಳೂರು, ಧಾರವಾಡ, ಕಲಬುರಗಿ -ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ.
3. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು - ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು.
4. ಕಛೇರಿ ಪ್ರತಿ.

Scanned with CamScanner